ಕರ್ನಾಟಕ ಸರ್ಕಾರದ,

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ: ಸಿ4[3]ಉತ್ತಮ ಶಾಲಾ ಪ್ರಶಸ್ತಿ08/2017-18 ದಿನಾಂಕ: 28.08.2017

ಜ್ಞಾಪನ

ವಿಷಯ: ಮಾಜಿ ಶಿಕ್ಷಣ ಸಚಿವರಾದ ಶ್ರೀ ಹೆಚ್.ಜಿ.ಗೋವಿಂದಗೌಡ ರವರ ಹೆಸರಿನಲ್ಲಿ 2016-17ನೇ ಸಾಲಿನಲ್ಲಿ ಬೆಂಗಳೂರು ವಿಭಾಗದಲ್ಲಿ ಒಂದು ಅತ್ಯುತ್ತಮ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಒಂದು ಸರ್ಕಾರಿ ಪ್ರೌಢಶಾಲೆಗೆ ಪ್ರಶಸ್ತಿ ನೀಡುವ ಬಗ್ಗೆ

ಉಲ್ಲೇಖ:-1. ಸರ್ಕಾರಿ ಆದೇಶ ಸಂಖ್ಯೆ ಇಡಿ 74 ಯೋಸಕ:05, ಬೆಂಗಳೂರು, ದಿನಾಂಕ:09-08-05 ಮತ್ತು 29-07-2005.

2. ದಿನಾಂಕ:28/08/2017 ರಂದು ನಡೆದ ಆಯ್ಕೆ ಸಮಿತಿ ಸಭೆಯ ನಡವಳಿಗಳು.

0-0-0

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಮಾಜಿ ಶಿಕ್ಷಣ ಸಚಿವರಾದ ದಿವಂಗತ ಶ್ರೀ ಹೆಚ್.ಜಿ. ಗೋವಿಂದ ಗೌಡರ ಹೆಸರಿನಲ್ಲಿ 2016-17 ನೇ ಸಾಲಿನಲ್ಲಿ ಬೆಂಗಳೂರು ವಿಭಾಗದಲ್ಲಿ ಒಂದು ಅತ್ಯುತ್ತಮ ಸರ್ಕಾರಿ ಕನ್ನಡ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಒಂದು ಅತ್ಯುತ್ತಮ ಸರ್ಕಾರಿ ಕನ್ನಡ ಮಾಧ್ಯಮ ಪ್ರೌಢಶಾಲೆಗೆ ಪ್ರಶಸ್ತಿ ನೀಡಿ ಗೌರವಿಸುವ ಸಲುವಾಗಿ ಮಾನ್ಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯು ದಿನಾಂಕ:28/08/2017 ರಂದು ಸಭೆ ಸೇರಿ ಈ ಕೆಳಕಂಡ ಶಾಲೆಗಳನ್ನು ಉತ್ತಮ ಪ್ರಶಸ್ತಿಗಾಗಿ ಆಯ್ಕೆ ಮಾಡಿದೆ.

***1.ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ,ಬೈಚಾಪುರ ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರಜಿಲ್ಲೆ.***

***2.ಸರ್ಕಾರಿ ಪದವಿ ಪೂರ್ವ ಕಾಲೇಜು [ಪ್ರೌಢಶಾಲಾ ವಿಭಾಗ] ನಾಗವಲ್ಲಿ, ತುಮಕೂರು ತಾಲ್ಲೂಕು & ಜಿಲ್ಲೆ.***

ಪ್ರಶಸ್ತಿಗಾಗಿ ನಗದು ಬಹುಮಾನವನ್ನು ಡಿ.ಡಿ ಮೂಲಕ ವಿತರಣೆ ಮಾಡಲಾಗುವುದು. ಈ ಪ್ರಶಸ್ತಿ ಮೊತ್ತವನ್ನು ಶಾಲೆಯ ಶೈಕ್ಷಣಿಕ ಚಟುವಟಿಕೆ ಹಾಗೂ ಶಾಲೆಯ ಮೂಲಭೂತ ಸೌಕರ್ಯಗಳಾದ ಗ್ರಂಥಾಲಯ, ಕಂಪ್ಯೂಟರ್ ಪ್ರಯೋಗಾಲಯ ಮತ್ತು ಮಕ್ಕಳ ಸೃಜನ ಶೀಲತೆಯನ್ನು ಹೆಚ್ಚಿಸುವ ಇತರ ಚಟುವಟಿಕೆಗಳಿಗೆ ಬಳಸಿಕೊಳ್ಳುವುದು.

ಶಾಲೆಯ ಮುಂದೆ **"ಮಲೆನಾಡ ಗಾಂಧಿ ದಿವಂಗತ ಶ್ರೀ ಹೆಚ್.ಜಿ ಗೋವಿಂದಗೌಡ ಪ್ರಶಸ್ತಿ ಪುರಸ್ಕೃತ ಶಾಲೆ"** ಎಂದು ದೊಡ್ಡದಾದ ನಾಮಫಲಕವನ್ನು ತಪ್ಪದೇ ಹಾಕಬೇಕು.

ಈ ಪ್ರಶಸ್ತಿಯನ್ನು ದಿನಾಂಕ:05/09/2017 ರಂದು **ಅಂಬೇಡ್ಕರ್ ಭವನ, ವಸಂತನಗರ, ಬೆಂಗಳೂರು** ಇಲ್ಲಿ ನಡೆಯುವ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆಯ ಸಮಾರಂಭದಲ್ಲಿ ನೀಡಲಿದ್ದು, ಮೇಲ್ಕಂಡ ಶಾಲೆಗಳ ಮುಖ್ಯಶಿಕ್ಷಕರು ಖುದ್ದಾಗಿ ಬಂದು ಈ ಪ್ರಶಸ್ತಿಯನ್ನು ಸ್ವೀಕರಿಸಲು ತಿಳಿಸಿದೆ.

ನಿರ್ದೇಶಕರು (ಪ್ರೌಢ ಶಿಕ್ಷಣ)

ಗೆ,

1. ಮುಖ್ಯಶಿಕ್ಷಕರು, ಬೈಚಾಪುರ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
2. ಉಪಪ್ರಾಂಶುಪಾಲರು ಸರ್ಕಾರಿ ಪದವಿ ಪೂರ್ವ ಕಾಲೇಜು, ನಾಗವಲ್ಲಿ, ತುಮಕೂರು ತಾಲ್ಲೂಕು & ಜಿಲ್ಲೆ.

ಪ್ರತಿಯನ್ನು:

1. ಉಪನಿರ್ದೇಶಕರು(ಆಡಳಿತ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಗ್ರಾಮಾಂತರ ತುಮಕೂರು ಜಿಲ್ಲೆ. ರವರಿಗೆ ಕಳುಹಿಸುತ್ತಾ ಸಂಬಂದಿಸಿದ ಶಾಲಾ ಮುಖ್ಯಸ್ಥರು ಸಕಾಲದಲ್ಲಿ ಪ್ರಶಸ್ತಿ ಸ್ವೀಕರಿಸಲು ಹಾಜರಾಗುವಂತೆ ಸೂಚಿಸಲು ತಿಳಿಸಿದೆ.
2. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ/ತುಮಕೂರು ತಾಲ್ಲೂಕು, ತುಮಕೂರು ಜಿಲ್ಲೆ. ಜಿಲ್ಲೆ ರವರ ಮುಂದಿನ ಕ್ರಮಕ್ಕಾಗಿ.
3. ಕಛೇರಿ ಪ್ರತಿ.